ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 25-03-2021 ಪ್ರಶ್ನೆ ಸಂಖ್ಯೆ : 1801 (2192)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 25-03-2021

ಉತ್ತರಿಸುವ ಸಚಿವರು: ಮಾನ್ಯ ಮುಖ್ಯಮಂತ್ರಿಗಳು

ವಿಷಯ : ಬೃಹತ್ ಮಹಾನಗರ ಪಾಲಿಕೆ ಪಾದಚಾರಿಗಳ ಸುರಂಗ ಮಾರ್ಗಗಳ ಬಗ್ಗೆ

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ನಗರದಲ್ಲಿ ನಿರ್ಮಿಸಿರುವ ಪಾದಚಾರಿ ಸುರಂಗ ಮಾರ್ಗ ಮತ್ತು ಸ್ಕೈವಾಕ್‌ಗಳೆಷ್ಟು ; (ವಿಧಾನಸಭಾ ಕ್ಷೇತ್ರವಾರು ಯಾವ್ಯಾವ ಸ್ಥಳಗಳಲ್ಲಿ ನಿರ್ಮಿಸಲಾಗಿದೆ ಎಂಬ ವಿವರ ನೀಡುವುದು)

(ಆ) ಇವುಗಳ ನಿರ್ಮಾಣಕ್ಕೆ ಮಾಡಿರುವ ವೆಚ್ಚ ಮತ್ತು ನಿರ್ವಹಣೆಗೆ ಮಾಡುತ್ತಿರುವ ವೆಚ್ಚ ಎಷ್ಟು; (ಸಂಪೂರ್ಣ ವಿವರ ನೀಡುವುದು)

(ಇ) ಈ ಪಾದಚಾರಿ ಸುರಂಗ ಮಾರ್ಗ ಮತ್ತು ಸ್ಕೈವಾಕ್‌ಗಳನ್ನು ಸಾರ್ವಜನಿಕರ ಉಪಯೋಗಕ್ಕೆ ಮುಕ್ತಗೊಳಿಸಲಾಗಿದೆಯೇ ; ಇಲ್ಲದಿದ್ದಲ್ಲಿ, ಕಾರಣಗಳೇನು ; ಎಷ್ಟು ಕಡೆ ಸಾರ್ವಜನಿಕರ ಉಪಯೋಗಕ್ಕೆ ಮುಕ್ತಗೊಳಿಸಿರುವುದಿಲ್ಲ ? (ವಿವರ ನೀಡುವುದು)